**ಗೌರವ...** ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅಭಿನಂದನೆ

# ಉತ್ತಮ ಶಿಕ್ಷಣ ನೀಡುವ ಜವಾಬ್ದಾರಿ ಶಿಕ್ಷಕರದ್ದು

• **ಕನ್ನಡಪ್ರಭ ವಾರ್ತೆ** ಧಾರವಾಡ

ರಾಜ್ಯ ಮಾಧ್ಯಮಿಕ ಶಾಲಾ ನೌಕರರ ಸಂಘ, ಪ್ರೌಢಶಾಲಾ ಸಹ ಶಿಕ್ಷಕರ ಸಂಘ ಹಾಗೂ ವಿವಿಧ ಸಂಘಟನೆಗಳ ವತಿಯಿಂದ ಇಲ್ಲಿಯ ಜೆಎಸ್ಎಸ್ ಕಾಲೇಜು ಆವರಣದ ಸನ್ನಿಧಿ ಕಲಾಕ್ಷೇತ್ರದಲ್ಲಿ ಬುಧವಾರ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅವರಿಗೆ ಆತ್ಮೀಯ ಅಭಿನಂದನೆ ಸಲ್ಲಿಸಲಾಯಿತು.

'ಶಿಕ್ಷಣ ಮತ್ತು ಶಿಕ್ಷಕರ ಮಹತ್ವ' ಕುರಿತು ಉಪನ್ಯಾಸ ನೀಡಿದ ವಿಶ್ರಾಂತ ಪ್ರಾಚಾರ್ಯ ಪ್ರೊ. ಬಿ.ಆರ್. ಪೊಲೀಸ್‌ಪಾಟೀಲ, ಶಿಕ್ಷಣ ಅಮೃತ ಇದ್ದಂತೆ. ಭವಿಷ್ಯದ ಪ್ರಜೆಗಳಿಗೆ ಉತ್ತಮ ಶಿಕ್ಷಣ ನೀಡುವ ಜವಾಬ್ದಾರಿ ಶಿಕ್ಷಕರ ಮೇಲಿದೆ. ಇದನ್ನು ಅರಿತು ಮುನ್ನಡೆಯುವ ಅನಿವಾರ್ಯತೆಯೂ ಇದೆ. ಈ ಕಾರ್ಯಕ್ಕೆ ಪಾಲಕರ ಸಹಕಾರವೂ ಅಗತ್ಯವಾಗಿದೆ. ಹಾಗೆಯೇ, ಶಿಕ್ಷಕರು ಪ್ರಶ್ನಿಸುವ ಮನೋ ಭಾವನೆ ಹೊಂದಬೇಕಲ್ಲದೆ, ಪ್ರತಿಯೊಬ್ಬರೂ ಪ್ರಸ್ತುತ ಶೈಕ್ಷಣಿಕ ಸಂದರ್ಭದಲ್ಲಿ ಶಿಕ್ಷಣವನ್ನು ಪುನರ್ ಮನನ ಮಾಡಿಕೊಳ್ಳಬೇಕಿದೆ ಎಂದರು.



ಸಭಾಪತಿ ಬಸವರಾಜ ಹೊರಟ್ಟಿ ಹಾಗೂ ಪತ್ನಿ ಹೇಮಲತಾ ಅವರನ್ನು ಗೌರವಿಸಲಾಯಿತು.

ಮುಂಡರಗಿ ತೋಂಟ ದಾರ್ಯ ಶಾಖಾ ಮಠದ ತೋಂಟದ ನಿಜಗುಣಪ್ರಭು ಸ್ವಾಮೀಜಿ, ವ್ಯಕ್ತಿ, ವ್ಯಕ್ತಿತ್ವ ಹಾಗೂ ಸಮಾಜವನ್ನು ಒಳಗೊಂಡಿರುವ ಪ್ರತೀಕ ಬಸವರಾಜ ಹೊರಟ್ಟಿ, ಅವರು ಶಿಕ್ಷಕರ ಹೋರಾಟದೊಂದಿಗೆ ಸಾಮಾಜಿಕ, ಧಾರ್ಮಿಕ ಕಾರ್ಯಗಳಿಗೂ ಸಹಕಾರ ನೀಡಿ ಜೀವಪರ ವ್ಯಕ್ತಿಯಾಗಿದ್ದಾರೆ ಎಂದು ಹೇಳಿದರು.

ಸನ್ಮಾನ ಸ್ವೀಕರಿಸಿದ ಸಭಾಪತಿ ಬಸವರಾಜ ಹೊರಟ್ಟಿ, 1977ರಲ್ಲಿ ಕರ್ನಾಟಕದಲ್ಲಿ ಮೊದಲು ಶಿಕ್ಷಕರ ಹೋರಾಟ ಆರಂಭಿಸಲಾಯಿತು. ಮೊದಲಿಗೆ ಶಿಕ್ಷಕರು ಹೋರಾಟಕ್ಕೆ ಬರಲು ಹಿಂದೇಟು ಹಾಕುತ್ತಿದ್ದರು. ಕ್ರಮೇಣ ಸಂಘಟನೆ ಮೂಲಕ ರಾಜ್ಯಾದ್ಯಂತ ಹೋರಾಟ ನಡೆಸಲಾಯಿತು. ನಿರಂತರ ಹೋರಾಟ ಹಾಗೂ ಶಿಕ್ಷಕರ ಸಹಕಾರದೊಂದಿಗೆ ಪ್ರಾಮಾಣಿಕ ಸೇವೆ ಮಾಡಿದ್ದರ ಫಲವಾಗಿ ಈ ಮಟ್ಟಕ್ಕೆ ಬೆಳೆಯಲು ಸಾಧ್ಯವಾಯಿತು. ಇಂದು ಶಿಕ್ಷಕರು ನೆಮ್ಮದಿಯಿಂದ ನೌಕರಿ ಮಾಡುತ್ತಿದ್ದಾರೆ ಎಂದರೆ ಅದು ಸಂಘದ ಫಲ ಎಂದರು.

- ಶಿಕ್ಷಕರು ಪ್ರಶ್ನಿಸುವ ಮನೋ ಭಾವನೆ ಹೊಂದಬೇಕು
- ಪ್ರತಿಯೊಬ್ಬರೂ ಪ್ರಸ್ತುತ ಶೈಕ್ಷಣಿಕ ಸಂದರ್ಭದಲ್ಲಿ ಶಿಕ್ಷಣವನ್ನು ಪುನರ್ ಮನನ ಮಾಡಿಕೊಳ್ಳಬೇಕು
- ಸಂಘದ ಬಲದಿಂದ ನೆಮ್ಮದಿಯ ನೌಕರಿ ಮಾಡುತ್ತಿರುವ ಶಿಕ್ಷಕರು

ಜೆಎಸ್ಎಸ್ ಕಾರ್ಯದರ್ಶಿ ಡಾ. ನ. ವಜ್ರಕುಮಾರ ಮಾತನಾಡಿ, ಬಸವರಾಜ ಹೊರಟ್ಟಿ ಶೈಕ್ಷಣಿಕ ಕ್ಷೇತ್ರದಲ್ಲಿ ವಿಶಿಷ್ಟ ಸಾಧನೆ ಮಾಡಿದ್ದಾರೆ. ಅವರ ಹೋರಾಟದ ಫಲವಾಗಿ ಶಿಕ್ಷಕರು ನೆಮ್ಮದಿಯಿಂದ ಕೆಲಸ ಮಾಡುತ್ತಿದ್ದಾರೆ. ಹೀಗಾಗಿ ಮುಂದಿನ ಚುನಾವಣೆಯಲ್ಲಿ ಅವಿರೋಧವಾಗಿ ಆಯ್ಕೆಯಾಗಲಿ ಎಂದು ಹಾರೈಸಿದರು. ಇದೇ ವೇಳೆ ಸಭಾಪತಿ ಬಸವರಾಜ ಹೊರಟ್ಟಿ, ಹೇಮಲತಾ ಹೊರಟ್ಟಿ ದಂಪತಿ ಸನ್ಮಾನಿಸಲಾಯಿತು. ಬಳಿಕ ಎಸ್ಸೆಸ್ಸೆಲ್ಸಿ ಪರೀಕ್ಷೆಯಲ್ಲಿ ಅತೀ ಹೆಚ್ಚು ಅಂಕಗಳಿಸಿದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ ನೌಕರರ ಸಂಘಕ್ಕೆ ಸೇವೆ ಸಲ್ಲಿಸಿದ ಹಿರಿಯ ಸದಸ್ಯರನ್ನು ಸನ್ಮಾನಿಸಲಾಯಿತು.

ಜೆಎಸ್ಎಸ್ ವಿತ್ತಾಧಿಕಾರಿ ಡಾ. ಅಜಿತ ಪ್ರಸಾದ, ಡಿಡಿಪಿಐ ಮೋಹನಕುಮಾರ ಹಂಚಾಟೆ, ಮಾಜಿ ಶಾಸಕ ಎನ್.ಎಚ್. ಕೋನರಡ್ಡಿ, ಬಿಇಒ ಗಿರೀಶ ಪದಕಿ, ಉಮೇಶ ಬೊಮ್ಮಕ್ಕನವರ, ಪ್ರಾಚಾರ್ಯ ಶಶಿಧರ ತೋಡಕರ, ನೌಕರರ ಸಂಘದ ಜಿ.ಆರ್. ಭಟ್, ಸಂಘಟನಾ ಕಾರ್ಯದರ್ಶಿ ಶ್ಯಾಮ ಮಲ್ಲನಗೌಡರ, ವಿ.ಎಸ್. ಹುದ್ದಾರ ಇದ್ದರು.

# ಬೆಳಗಾವಿಯಲ್ಲಿಯೇ ಚಳಿಗಾಲದ ಅಧಿವೇಶನ

**ಧಾರವಾಡ:** ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ನಮ್ಮ ಕಡೆಯವರಿದ್ದು ಈ ಬಾರಿಯ ಚಳಿಗಾಲದ ಅಧಿವೇಶನ ಬೆಳಗಾವಿಯಲ್ಲಿಯೇ ಮಾಡಿ ತೀರುತ್ತೇವೆ



ಎಂದು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹೇಳಿದ್ದಾರೆ. ಬುಧವಾರ ಸುದ್ದಿಗಾರರೊಂದಿಗೆ ಮಾತನಾಡಿರುವ ಅವರು, ಈ ಹಿಂದಿನ ಮುಖ್ಯಮಂತ್ರಿಗಳಿಗೂ ಈ ಕುರಿತಾಗಿ ತಾವು ಪತ್ರ ಬರೆದು ಒತ್ತಾಯ ಮಾಡಲಾಗಿತ್ತು. 900 ಜನ ಅಧಿಕಾರಿಗಳು, ಶಾಸಕರು ಸೇರಿ ಬಹಳ ಜನ ಆಗುತ್ತಾರೆ. ಮಳೆಗಾಲ ಮತ್ತು ಕೋವಿಡ್ ಹಿನ್ನೆಲೆಯಲ್ಲಿ ಬೆಂಗಳೂರಿನಲ್ಲಿಯೇ ಮಾಡಲಾಗುವುದು ಎಂದಿದ್ದರು. ಆದರೆ, ಈಗ ಮುಖ್ಯ ಮಂತ್ರಿಗಳು ಬದಲಾಗಿದ್ದಾರೆ. ನವೆಂಬರ್ ಅಥವಾ ಡಿಸೆಂಬರ್‌ನಲ್ಲಿ ಬೆಳಗಾವಿಯಲ್ಲಿಯೇ ಅಧಿವೇಶ ಮಾಡಲಾಗುವುದು ಎಂದರು. ಬೆಳಗಾವಿ ಸುವರ್ಣ ಸೌಧಕ್ಕೆ ಸರ್ಕಾರಿ ಕಚೇರಿಗಳ ಸ್ಥಳಾಂತರ ಕುರಿತು ಪ್ರತಿಕ್ರಿಯೆ ನೀಡಿದ ಅವರು, ಒಟ್ಟು 9 ಕಚೇರಿ ಸ್ಥಳಾಂತರ ಮಾಡುವಂತೆ ನಾವು ಕೇಳಿದ್ದೆವು. ಈ ಪೈಕಿ 3 ಕಚೇರಿಗಳನ್ನು ಸ್ಥಳಾಂತರ ಮಾಡಲಾಗಿದೆ ಎಂದರು.